## ಕಾರ್ಕಳ ಎಂ.ಪಿ.ಎಂ. ಸರಕಾರಿ ಪ್ರಥಮ ದರ್ಜೆ ಕಾಲೇಜು

# ಗಾಂಧಿ ಜಯಂತಿ ಪ್ರಯುಕ್ತ ಸ್ವಚ್ಛತಾ ಕಾರ್ಯಕ್ರಮ



■ ಗಾಂಧೀಜಿ 150- ಸ್ವಚ್ಛತೆಗೆ ಸ್ವಲ್ಪ ಹೊತ್ತು ಸ್ವಚ್ಛತಾ ಅಭಿಯಾನದ ಪ್ರಯುಕ್ತ ಎಂ.ಪಿ.ಎಂ. ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ

**ಕಾರ್ಕಳ:** ಮಹಾತ್ಮಾ ಗಾಂಧೀಜಿಯವರ 150ನೇ ಜಯಂತಿ ಪ್ರಯುಕ್ತ ಗಾಂಧೀಜಿ 150- ಸ್ವಚ್ಛತೆಗೆ ಸ್ವಲ್ಪ ಹೊತ್ತು ಸ್ವಚ್ಛತಾ ಅಭಿಯಾನದ ಪ್ರಯುಕ್ತ ಬುಧವಾರ ಸ್ಥಳೀಯ ಎಂ.ಪಿ.ಎಂ. ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ರಾ.ಸೇ.ಯೋ. ಯುವ ರೆಡ್ ಕ್ರಾಸ್ ಘಟಕ, ರೋವರ್ಸ್ ಮತ್ತು ರೇಂಜರ್ಸ್ ಘಟಕ ಹಾಗೂ ಕಾಲೇಜಿನ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಸ್ವಚ್ಛತಾ ಕಾರ್ಯಕ್ರಮ ನಡೆಯಿತು.

ಶಾಸಕ, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಸುನೀಲ್ ಕುಮಾರ್ ಅಭಿಯಾನಕ್ಕೆ ಚಾಲನೆ ನೀಡಿದರು.

ಪ್ರಾಂಶುಪಾಲ ಪ್ರೊ. ಶ್ರೀವರ್ಮ ಅಜ್ರಿ, ರಾ.ಸೇ.ಯೋ. ಅಧಿಕಾರಿ ನವೀನ, ಯುವ ರೆಡ್‌ಕ್ರಾಸ್ ಘಟಕದ ಸಂಚಾಲಕಿ ದಿವ್ಯಾ ಪ್ರಭು, ರೇಂಜರ್ ಘಟಕದ ಸಂಚಾಲಕಿ ಸಂಧ್ಯಾ ಭಂಡಾರಿ, ರೋವರ್ ಘಟಕದ ಸಂಚಾಲಕರಾ ಕೃಷ್ಣಮೂರ್ತಿ ವೈದ್ಯ, ಯೋಗೇಶ್ ಡಿ. ಎಚ್., ಗಣೇಶ್, ಮಂಜುನಾಥ್, ಸುಮಂತ್ ಕುಮಾರ್ ಜೈನ್, ಉಪನ್ಯಾಸಕ ವೃಂದ ಮತ್ತು ಕಾಲೇಜಿನ ವಿದ್ಯಾರ್ಥಿಗಳು ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಂಡು ಕಾಲೇಜಿನ ಸುತ್ತಲಿನ ಸುಮಾರು 8 ಕಿ.ಮೀ. ನಷ್ಟು ರಸ್ತೆಯ ಇಕ್ಕೆಲಗಳನ್ನು ಸ್ವಚ್ಛಗೊಳಿಸಿದರು. ವಾಣಿಜ್ಯ ವಿಭಾಗದ ಮುಖ್ಯಸ್ಥೆ ಜ್ಯೋತಿ ಎಲ್.ಜೆ. ಸ್ವಾಗತಿಸಿ, ಸ್ನಾತಕೋತ್ತರ ವಿಭಾಗದ ಸಂಯೋಜಕ ವಿದ್ಯಾಧರ್ ಹೆಗ್ಡೆ ವಂದಿಸಿದರು.

ಹೊಸದಿಗಂತ 4/10/19